ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 04/03/2020

# ಸ್ಪೀಕರ್ ವಿರುದ್ಧ ಇಂದು ಗೌರ್ನರ್‌ಗೆ ಕಾಂಗ್ರೆಸ್ ದೂರು

## ಯತ್ನಾಳ್ ಬಗ್ಗೆ ಚರ್ಚಿಸಲು ಅವಕಾಶ ನೀಡದಿದ್ದಕ್ಕೆ ಆಕ್ಷೇಪ

• **ಕನ್ನಡಪ್ರಭ ವಾರ್ತೆ** ವಿಧಾನಸಭೆ

ಸ್ವಾತಂತ್ರ್ಯ ಹೋರಾಟಗಾರ ದೊರೆಸ್ವಾಮಿ ವಿರುದ್ಧ ಕೀಳು ಹೇಳಿಕೆ ನೀಡುವ ಮೂಲಕ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಸಂವಿಧಾನದ ಆಶಯಗಳಿಗೆ ಚ್ಯುತಿ ತಂದಿದ್ದು, ಈ ಬಗ್ಗೆ ಚರ್ಚಿಸಲು ಅವಕಾಶ ನೀಡದ ಸ್ಪೀಕರ್ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ರಾಜ್ಯಪಾಲರಿಗೆ ದೂರು ನೀಡಲು ಕಾಂಗ್ರೆಸ್ ಪಕ್ಷ ನಿರ್ಧರಿಸಿದೆ.

ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ನೇತೃತ್ವದಲ್ಲಿ ಕಾಂಗ್ರೆಸ್ ನಿಯೋಗ ಬುಧವಾರ ಬೆಳಗ್ಗೆ ರಾಜ್ಯಪಾಲರಿಗೆ ದೂರು ನೀಡಲಿದೆ. ಜತೆಗೆ, ಬುಧವಾರ ಕಲಾಪದಲ್ಲಿ ಪಾಲ್ಗೊಂಡರೂ ಸಂವಿಧಾನದ ಬಗೆಗಿನ ಚರ್ಚೆಯಲ್ಲಿ ಭಾಗವಹಿಸದೆ ಸದನದಲ್ಲಿ ಕಳೆದ ಎರಡು ದಿನಗಳಿಂದ ನಡೆಸುತ್ತಿರುವ ತನ್ನ ಹೋರಾಟ ಮುಂದುವರೆಸಲು ತೀರ್ಮಾನಿಸಿದೆ.

ಮಂಗಳವಾರದ ಕಲಾಪ ಮುಂದೂಡಿಕೆ ಕಂಡ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಿದ್ದರಾಮಯ್ಯ, ಯತ್ನಾಳ್ ಸಂವಿಧಾನಕ್ಕೆ ವಿರುದ್ಧವಾಗಿ ನಡೆದುಕೊಂಡಿದ್ದಾರೆ. ಆದರೂ, ಸ್ಪೀಕರ್ ಈ ಬಗ್ಗೆ ಚರ್ಚೆಗೆ ಅವಕಾಶ ನೀಡುತ್ತಿಲ್ಲ, ಆಡಳಿತ ಪಕ್ಷ ಯತ್ನಾಳ್ ಬೆಂಬಲಕ್ಕೆ ನಿಂತಿದೆ. ಹೀಗಾಗಿ ರಾಜ್ಯಪಾಲರಿಗೆ ದೂರು ನೀಡಲು ತೀರ್ಮಾನಿಸಿದ್ದೇವೆ ಎಂದರು.

ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ತಮ್ಮ ಕೀಳು ಹೇಳಿಕೆ ಮೂಲಕ ಇಡೀ ಸ್ವಾತಂತ್ರ್ಯ ಸ್ವಾತಂತ್ರ್ಯ ಹೋರಾಟಗಾರರಿಗೆ ಅವಮಾನ ಮಾಡಿದ್ದಾರೆ. ಇದು ಸಂವಿಧಾನದ ವಿಧಿ 51ಎ(ಬಿ) ನಲ್ಲಿರುವ ಹೊಣೆಗಾರಿಕೆಯ ಉಲ್ಲಂಘನೆ. ಹಾಗಾಗಿ ಇದರ ಚರ್ಚೆಗೆ ನಿಯಮಗಳಡಿ ಅವಕಾಶ ಕೇಳಲಾಗದು. ಸ್ಪೀಕರ್ ತಮ್ಮ ವಿಶೇಷ ಅಧಿಕಾರ ಬಳಸಿ ಚರ್ಚೆಗೆ ಅವಕಾಶ ಕೊಡುತ್ತಿಲ್ಲ ಎಂದರು.